# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 789 |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಇ-ಸ್ವತ್ತು ತಂತ್ರಾಂಶದಲ್ಲಿ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; ಸಮಸ್ಯೆ ಪರಿಹಾರಕ್ಕೆ ಕೈಗೊಳ್ಳಲಾದ ಕ್ರಮಗಳೇನು; | ಬಂದಿದೆ.<br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರನ್ವಯ ಇ-ಸ್ವತ್ತು 2.0 ತಂತ್ರಾಂಶವನ್ನು ಹೊಸದಾಗಿ ಹೆಚ್ಚುವರಿ ತಂತ್ರಜ್ಞಾನದೊಂದಿಗೆ ಅಳವಡಿಸಲಾಗಿರುತ್ತದೆ. |
| (ಆ) | ಪಂಚಾಯತ್ ವ್ಯಾಪ್ತಿಯಲ್ಲಿರುವ ಕ್ರಮ ಬದ್ಧ ವಲ್ಲದ ಆಸ್ತಿಗಳಿಗೆ ಹಿಂದಿನಂತೆ ನಮೂನೆ 11ಬಿ ಸೃಜನೆಗೆ ಪ್ರಸ್ತುತ ಅವಕಾಶವಿಲ್ಲದ ಕಾರಣ ಗ್ರಾಮ ಪಂಚಾಯತ್‌ಗಳ ತೆರಿಗೆ ವರಮಾನ ಇಳಿಕೆಯಾಗಿದ್ದು, ಈಗಾಗಲೇ ಪಂಚತಂತ್ರ ತಂತ್ರಾಂಶದಲ್ಲಿರುವ 11 ಬಿ ಆಸ್ತಿಗಳಿಗೆ ಪೌತಿಖಾತೆ ಬದಲಾವಣೆಗೆ ಅವಕಾಶವಿಲ್ಲದರಿಂದ ಈ ಸಮಸ್ಯೆ ಬಗೆಹರಿಸಲು ಕೈಗೊಳ್ಳಲಾದ ಕ್ರಮಗಳೇನು; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) - ನಿಯಮಗಳು, 2025 ರನ್ವಯ ಇ-ಸ್ವತ್ತು ತಂತ್ರಾಂಶವನ್ನು ದಿನಾಂಕ: 01.12.2025 ರಂದು ಹೊಸದಾಗಿ ರೂಪಿಸಲಾಗಿದ್ದು, ನಮೂನೆ-11ಬಿ ವಿತರಣೆ ಹಾಗೂ ಪೌತಿ ಖಾತೆ ಬದಲಾವಣೆಗೆ ಅವಕಾಶಗಳನ್ನು ಕಲ್ಪಿಸಲಾಗಿರುತ್ತದೆ. |
| (ಇ) | ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಕ್ರಮಬದ್ಧವಲ್ಲದ ಆಸ್ತಿಗಳಿಗೆ ಈಗಾಗಲೇ ಸೃಜಿಸಲಾದ ನಮೂನೆ 11 ಬಿ ಯನ್ನು ನಮೂನೆ 9 & 11 ಎ ಗೆ ಬದಲಾಯಿಸಲು ಅವಕಾಶವಿಲ್ಲದಿರುವುದಿಲ್ಲ ಹಾಗೂ ಆರ್ಥಿಕ ದುರ್ಬಬಿಯನ್ನು ವರ್ಗದವರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳಲ್ಲಿ ಕೃಷಿ ಜಮೀನನಲ್ಲಿ ನಿರ್ಮಿಸಿರುವ ಮನೆಗಳಿಗೆ ಕದನಂಬ್ರ ನೀಡಲು ಅವಕಾಶವಿಲ್ಲದಿರುವುದರಿದಂದ ಈ ಸಮಸ್ಯೆ ಹರಿಸಲು ಸರ್ಕಾರ | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರ ಅನುಬಂಧ-1 ರಲ್ಲಿನ ದಾಖಲೆಗಳ ಇ-ಸ್ವತ್ತು ತಂತ್ರಾಂಶದಲ್ಲಿ ಈಗಾಗಲೇ ಸೃಜಿಸಲಾದ ನಮೂನೆ 11 ಬಿಯನ್ನು ನಮೂನೆ 9 & 11 ಎ ಗೆ ಬದಲಾಯಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ವಿವಿಧ ವಸತಿ ಯೋಜನೆಯಡಿ ನಿರ್ಮಿಸಲಾಗಿರುವ ಮನೆಗಳಿಗೆ ನಮೂನೆಗಳನ್ನು ವಿತರಣೆ ಮಾಡಲು ಇ-ಸ್ವತ್ತು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. |

| | | |
|---|---|---|
| | ತೆಗೆದುಕೊಂಡ ಕ್ರಮವೇನು; | |
| ಈ | 94 ಸಿ & 94ಸಿಸಿಯಡಿ ವಿತರಿಸಲಾದ ಹಕ್ಕುಪತ್ರಗಳಿಗೆ ಈ ಹಿಂದೆ ನೇರವಾಗಿ ನಮೂನೆ 9 & 11ಎ ಸೃಜನೆಗೆ ಅವಕಾಶವಿದ್ದು ಪ್ರಸ್ತುತ ಸದರಿ ಅವಕಾಶವನ್ನು ತೆಗೆದಿರುವ ಕಾರಣ ಹಾಗೂ ಯಾವುದೇ ಆನ್ಲೈನ್ ಲಿಂಕ್‌ಗಳನ್ನು ಈವರೆವಗೂ ಇ-ಸ್ವತ್ತು ತಂತ್ರಾಂಶಕ್ಕೆ ಕಳುಹಿಸಿರುವುದಿಲ್ಲವಾಧ್ದರಿಂದ, ಈ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ?(ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:RDPR 318 GPA 2025 (ಭಾಗ-2) (E) ದಿನಾಂಕ:24.04.2025 ರನ್ವಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಕರ್ನಾಟಕ ಭೂ-ಕಂದಾಯ ಕಾಯ್ದೆ 1964 ರ, ಪ್ರಕರಣ 94(ಸಿ), 94(ಸಿ.ಸಿ) ಹಾಗೂ 94 (ಡಿ) ರಡಿಯಲ್ಲಿ ನಿವೇಶನ ಮತ್ತು ಮನೆ ನೀಡುವ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ -9 ಮತ್ತು 11-ಎ ನೀಡುವ ಬಗ್ಗೆ ಕ್ರಮವಹಿಸಲು ಆದೇಶ ಹೊರಡಿಸಲಾಗಿರುತ್ತದೆ.<br><br>ಮೇಲಿನ ಆದೇಶದನ್ವಯ ಕಂದಾಯ ಇಲಾಖೆಯಿಂದ ತಂತ್ರಾಂಶದ ಮೂಲಕ ಇಲಾಖೆಯ ಇ-ಸ್ವತ್ತು ತಂತ್ರಾಂಶಕ್ಕೆ ಮಾಹಿತಿಯು ಸ್ವೀಕೃತವಾಗುತ್ತಿದ್ದು, ನಿಯಮಗಳನ್ವಯ ನಮೂನೆಗಳನ್ನು ವಿತರಣೆ ಮಾಡಲಾಗುತ್ತಿರುತ್ತದೆ.<br><br>ಆದೇಶದ ಪ್ರತಿಯನ್ನು ಅನುಬಂಧದಲ್ಲಿ ನೀಡಿದೆ. |

ಸಂಖ್ಯೆ: ಗ್ರಾಅಪ 954 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಈ ಸೇರಿಂ ಕೆ

## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಪ್ರಕರಣ 94(ಸಿ), 94(ಸಿ.ಸಿ) ಹಾಗೂ 94 (ಡಿ) ರಡಿಯಲ್ಲಿ ನಿವೇಶನ ಮತ್ತು ಮನೆ ನೀಡುವ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ -9 ಮತ್ತು 11-ಎ ನೀಡುವ ಬಗ್ಗೆ.

**ಓದಲಾದ:** ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:16.04.2025 ರಂದು ನಡೆದ ಸಭೆಯಲ್ಲಿ ಚರ್ಚಿಸಿದಂತೆ.

**ಪ್ರಸ್ತಾವನೆ:**

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 94-(ಡಿ) ರಡಿಯಲ್ಲಿ ದಾಖಲಾಗದ ವಾಸಿಸುವ ಸ್ಥಳಗಳಲ್ಲಿರುವ ಸರ್ಕಾರಿ ಭೂಮಿಯಲ್ಲಿ ನಿರ್ಮಿಸಲಾದ, ಅದರ ಮತ್ತು ಅದಕ್ಕೆ ನಿಕಟದಲ್ಲಿ ತಾಗಿಕೊಂಡಿರುವ ನಿವೇಶನ ಸಹಿತವಾಗಿ ವಾಸದ ಮನೆಯ ಭೂಮಿಯನ್ನು ಸಕ್ರಮಗೊಳಿಸುವುದು ಮತ್ತು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಓದಲಾದ ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸರ್ಕಾರವು ಸುಮಾರು 3800 ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮವಾಗಿ ಪರಿವರ್ತಿಸಲಾಗಿದ್ದು, ಅಂತಹ ಪ್ರದೇಶಗಳಲ್ಲಿ ಸರ್ಕಾರಿ ಭೂಮಿಯಲ್ಲಿ ನಿರ್ಮಿಸಲಾಗಿರುವ ಮನೆಯನ್ನು ಭೂಮಿಯಸಹಿತ ಸಕ್ರಮಗೊಳಿಸಲು ತೀರ್ಮಾನವನ್ನು ತೆಗೆದುಕೊಂಡಿರುವುದಾಗಿ ತಿಳಿಸಿರುತ್ತಾರೆ. ಈಗಾಗಲೇ ನೋಂದಣಿ ಕಾಯ್ದೆಗೆ ತಿದ್ದುಪಡಿ ತಂದಿರುವುದರಿಂದ, ಗ್ರಾಮ ಪಂಚಾಯತಿಯ ಆಸ್ತಿ ಗುರುತಿನ ಸಂಖ್ಯೆ (ಪಿಐಡಿ) ಇಲ್ಲದೇ ವಾಸದ ಮನೆ ಮತ್ತು ನಿವೇಶನವನ್ನು ವರ್ಗಾಯಿಸಲು ಅವಕಾಶವಿರುವುದಿಲ್ಲ. ಆದ್ದರಿಂದ, ಪ್ರಸ್ತುತ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 94(ಸಿ), 94(ಸಿ.ಸಿ) ಹಾಗೂ 94(ಡಿ) ರಡಿಯಲ್ಲಿ ಸಕ್ರಮಗೊಳಿಸಲು ನಿರ್ಧರಿಸಿರುವಂತಹ ವಾಸದ ಮನೆ ಮತ್ತು ಭೂಮಿಗೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಿಂದ ಭೂಮಿ ತಂತ್ರಾಂಶದ ಮೂಲಕ ಸ್ವೀಕರಿಸುವಂತಹ ಪ್ರಸ್ತಾವನೆಯ ಆಧಾರದ ಮೇಲೆ ಕಂದಾಯ ಇಲಾಖೆಯು ಕೋರುವಂತಹ ಸಕ್ಷಮ ಪ್ರಾಧಿಕಾರದ ಹೆಸರಿಗೆ ಸದರಿ ವಾಸದ ಮನೆ ಮತ್ತು ಭೂಮಿಯನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದಡಿಯಲ್ಲಿ ಖಾತೆ ಸೃಷ್ಟಿಸಿ, ಆಸ್ತಿಯ ಗುರುತಿನ ಸಂಖ್ಯೆಯನ್ನು (ಪಿಐಡಿ) ಇ-ಸ್ವತ್ತು ತಂತ್ರಾಂಶದಲ್ಲಿ ನೀಡಬೇಕೆಂದು ತಿಳಿಸಿರುತ್ತಾರೆ.

ಇದೊಂದು ಒಂದು ವಿಶೇಷ ಪ್ರಕರಣವಾಗಿರುವುದರಿಂದ ಹೊಸದಾಗಿ ಪ್ರಕ್ರಿಯೆಯನ್ನು ಸೂಚಿಸುವುದು ಅಗತ್ಯವೆಂದು ಕಂಡುಬಂದಿರುವುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:RDPR 318 GPA 2025 (ಭಾಗ-2) (E),**
**ಬೆಂಗಳೂರು ದಿನಾಂಕ:24.04.2025.**

25/4

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಪ್ರಕರಣ 94(ಸಿ),

94(ಸಿ.ಸಿ) ಹಾಗೂ 94(ಡಿ) ರಡಿಯಲ್ಲಿ ನಿವೇಶನ ಮತ್ತು ಮನೆ ನೀಡುವ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11-ಎ ನೀಡಲು ಈ ಕೆಳಕಂಡಂತೆ ಪ್ರಕ್ರಿಯೆಯನ್ನು ಕೈಗೊಳ್ಳಲು ಆದೇಶಿಸಿದೆ.

1. ಗ್ರಾಮ ಪಂಚಾಯಿತಿಗಳು ಕಂದಾಯ ಇಲಾಖೆಯ ತಂತ್ರಾಂಶದ ಮೂಲಕ ಇ-ಸ್ವತ್ತು ತಂತ್ರಾಂಶದಲ್ಲಿ ಸ್ವೀಕರಿಸಿದ ಮಾಹಿತಿಗೆ ಅನುಗುಣವಾಗಿ ಕಂದಾಯ ಇಲಾಖೆಯ ಸಕ್ಷಮ ಪ್ರಾಧಿಕಾರದ ಹೆಸರಿಗೆ ತಕ್ಷಣ ಗ್ರಾಮ ಪಂಚಾಯಿತಿಯ ದಾಖಲೆಗಳಲ್ಲಿ ನಮೂದಿಸಿ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಗಳನ್ನು ಸೃಜಿಸಿ ಅನುಮೋದನೆ ನೀಡುವುದು.
2. ಕಂದಾಯ ಇಲಾಖೆಯ ಸಕ್ಷಮ ಪ್ರಾಧಿಕಾರದ ಹೆಸರಿಗೆ ಸೃಜಿಸಲಾಗುವ ನಮೂನೆಗಳ ಹಾಗೂ ಇ-ಸ್ವತ್ತು ತಂತ್ರಾಂಶಕ್ಕೆ ಸಂಬಂಧಿಸಿದ ಫೀಜುಗಳಿಗೆ ವಿನಾಯಿತಿ ನೀಡತಕ್ಕದ್ದು.
3. ಕಂದಾಯ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಸಂಬಂಧಿಸಿದ ಫಲಾನುಭವಿಗಳಿಗೆ ನೊಂದಾಯಿತ ಪ್ರಮಾಣ ಪತ್ರದ ಮೂಲಕ ಆಸ್ತಿಯು ವರ್ಗಾವಣೆಯಾಗಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ತಂತ್ರಾಂಶದಿಂದ ಕಂದಾಯ ಇಲಾಖೆಯು ನಿಗಧಿಪಡಿಸುವ ಅವಧಿಯವರೆಗೆ ಯಾವುದೇ ರೀತಿಯ ಪರಭಾರೆಗೆ ಅವಕಾಶ ಇರದ ಬಗ್ಗೆ ಹಕ್ಕು ಮತ್ತು ಹೊಣೆಗಾರಿಕೆಗಳಲ್ಲಿ ನಮೂದಿಸುವುದರೊಂದಿಗೆ ಸ್ವೀಕರಿಸಿದ XMLFile ಗಳನ್ನು ತಕ್ಷಣ ಸಾರ್ವಜನಿಕ ಆಕ್ಷೇಪಣೆ/ಸಲಹೆಗಳನ್ನು ಸ್ವೀಕರಿಸಲು 15 ದಿನಗಳ ನೋಟೀಸನ್ನು ಹೊರಡಿಸತಕ್ಕದ್ದು.
4. 15 ದಿನಗಳ ತರುವಾಯ ಸ್ವೀಕರಿಸಿದಂತಹ ಆಕ್ಷೇಪಣೆಗಳನ್ನು ನಿಯಮಾನುಸಾರ ವಿಲೇಪಡಿಸತಕ್ಕದ್ದು.
5. ಇದೊಂದು ವಿಶೇಷ ಪ್ರಕರಣವಾಗಿರುವುದರಿಂದ ಇ-ಸ್ವತ್ತು ತಂತ್ರಾಂಶದಲ್ಲಿ ಗ್ರಾಮ ಪಂಚಾಯತಿಯ ನಿರ್ಣಯ ಸಂಖ್ಯೆ ಮತ್ತು ದಿನಾಂಕವನ್ನು ಇಂದೀಕರಿಸುವುದರಿಂದ ವಿನಾಯತಿಯನ್ನು ನೀಡಿದೆ.
6. ಗ್ರಾಮ ಪಂಚಾಯತಿಯ ಮುಂದಿನ ಸಾಮಾನ್ಯ ಸಭೆಯಲ್ಲಿ ಇಂತಹ ಪ್ರಕರಣಗಳನ್ನು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಮಂಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ॥ ಎನ್. ಮಂಜುಳಾ ಕುಮಾರ್)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಕಂದಾಯ ಆಯುಕ್ತರು, ಕಂದಾಯ ಇಲಾಖೆ, ಕಂದಾಯ ಭವನ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
4. ನಿರ್ದೇಶಕರು, (ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು- ರವರು ಇ-ಸ್ವತ್ತು ತಂತ್ರಾಂಶದಲ್ಲಿ ಅಗತ್ಯ ಮಾರ್ಪಾಟು ಮಾಡಲು.
5. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಕಂದಾಯ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

7. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
8. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು .
9. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
3. ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.